ರಾಜ್ಯದ ಸರ್ಕಾರ ನಗರ ಪಾಲಿಕೆ, ನಗರಸಭೆ ಹಾಗೂ ಪುರಸಭೆ ನೌಕರರ ಪರಸ್ಪರ ವರ್ಗಾವಣೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 87(180)

ಸದಸ್ಯರ ಹೆಸರು: ಶ್ರೀ ವಿಜಯಕುಮಾರ್ ಶೆಟ್ಟಿ(ಸುರತ್ಕಲ್)

ಉತ್ತರಿಸುವ ಸಚಿವರು: ಶ್ರೀ ಬಿ.ಬಿ.ಚಿಮ್ಮನಕಟ್ಟಿ(ನಗರಾಭಿವೃದ್ಧಿ ಸಚಿವರು)

ಪ್ರಶ್ನೆ

ಅ) ರಾಜ್ಯ ಸರ್ಕಾರ ನಗರ ಪಾಲಿಕೆಗಳು, ನಗರಸಭೆಗಳು, ಪುರಸಭೆಗಳು, ಮತ್ತಿತರ ಸ್ಥಳೀಯ ಸಂಸ್ಥೆಗಳ ನೌಕರರನ್ನು ಪರಸ್ಪರ ವರ್ಗಾಯಿಸುವ ಕ್ರಮಗಳನ್ನು ಸರ್ಕಾರ ಈವರೆಗೆ ತೆಗೆದುಕೊಳ್ಳದಿರಲು ಕಾರಣವೇನು?

ಆ) ಆಡಳಿತದಲ್ಲಿ ದಕ್ಷತೆ ಹೆಚ್ಚಿಸಲು ಮೇಲ್ಕಂಡ ನೌಕರರ ವರ್ಗಾವಣೆಯ ಕುರಿತು ಸರ್ಕಾರದ ನೀತಿಯ ಸ್ವರೂಪವೇನು?

ಇ) ಮೇಲ್ಕಂಡ ವರ್ಗಾವಣೆಗಳನ್ನು ಎಂದಿನಿಂದ ಕಾರ್ಯರೂಪಕ್ಕೆ ತರಲಾಗುವುದು?

ಉತ್ತರ

ಅ) ಆ) ಮತ್ತು ಇ)

ನೌಕರರನ್ನು ಒಂದು ಮಹಾನಗರ ಪಾಲಿಕೆಯಿಂದ ಇನ್ನೊಂದು ಮಹಾನಗರ ಪಾಲಿಕೆಗೆ ವರ್ಗಾವಣೆ ಮಾಡುವ ವಿಷಯವು ಪರಿಶೀಲನೆಯಲ್ಲಿದೆ. ಆದಾಗ್ಯೂ, ನಗರಸಭೆ, ಪುರಸಭೆ, ಮತ್ತು ಪಟ್ಟಣ ಪಂಚಾಯ್ತಿಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ನೌಕರರುಗಳನ್ನು ಒಂದು ಸ್ಥಳೀಯ ಸಂಸ್ಥೆಯಿಂದ ಮತ್ತೊಂದು ಸ್ಥಳೀಯ ಸಂಸ್ಥೆಗೆ ವರ್ಗಾವಣೆ ಮಾಡಲು ನಿಯಮಗಳಲ್ಲಿ ಅವಕಾಶ ಇದ್ದು ಅದು ಚಾರಿಯಲ್ಲಿರುತ್ತದೆ.

ನಗರ ಪ್ರದೇಶಗಳಲ್ಲಿ ಅಭಿವೃದ್ಧಿ ಶುಲ್ಕ ವಸೂಲು ಮಾಡುವುದು.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 88(192)

ಸದಸ್ಯರ ಹೆಸರು: ಶ್ರೀ ಎಂ.ಎಸ್.ಆತ್ಮಾನಂದ(ಮಂಡ್ಯ)

ಉತ್ತರಿಸುವ ಸಚಿವರು: ಶ್ರೀ ಬಿ.ಬಿ.ಚಿಮ್ಮನಕಟ್ಟಿ(ನಗರಾಭಿವೃದ್ಧಿ ಸಚಿವರು)

ಪ್ರಶ್ನೆ

ಅ) ನಗರ ಪ್ರದೇಶಗಳಲ್ಲಿ ಅಭಿವೃದ್ಧಿ ತೆರಿಗೆ ವಸೂಲಿ ಮಾಡುವ ಬಗ್ಗೆ ನಗರಸಭೆ ಹಾಗೂ ನಗರಾಭಿವೃದ್ಧಿ ಪ್ರಾಧಿಕಾರ ನಡುವೆ ಜಿಜ್ಞಾಸೆ ಇದ್ದು ನಗರಸಭೆ ಅಭಿವೃದ್ಧಿ ಶುಲ್ಕ ವಸೂಲಿ ಮಾಡಲು, ಕಾನೂನು ತೊಡಕು ಇರುವುದನ್ನು ನಿವಾರಿಸಿ, ಪರಿಹಾರ ವ್ಯವಸ್ಥೆ ಮಾಡಲು ಈ ಹಿಂದೆ ಸರ್ಕಾರವು ಆಶ್ವಾಸನೆ ನೀಡಿತ್ತೇ?

ಆ) ಹಾಗಿದ್ದಲ್ಲಿ, ಇದನ್ನೂ ಸಹ ಕಾರ್ಯಗತವಾಗದಿರಲು ಕಾರಣವೇನು?

ಇ) ಈ ಕಾನೂನು ತೊಡಕನ್ನು ಪರಿಹರಿಸುವ ದಿಶೆಯಲ್ಲಿ ಈವರೆಗೆ ಸರ್ಕಾರವು ಯಾವ ಕ್ರಮ ಕೈಗೊಂಡಿದೆ?

ಉತ್ತರ

ಅ) ಹೌದು

ಆ ಮತ್ತು ಇ) ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ ಅಧಿನಿಯಮಕ್ಕೆ ಸೂಕ್ತ ತಿದ್ದುಪಡಿ ತರಲು ಸರ್ಕಾರ ಕಾರ್ಯೋನ್ಮುಖವಾಗಿದೆ. ಕರಡು ತಿದ್ದುಪಡಿಯನ್ನು ರೂಪಿಸಿ ಪರಿಶೀಲನೆಗಾಗಿ ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನಾ ಇಲಾಖೆಗೆ ಕಳುಹಿಸಿಕೊಡಲಾಗಿತ್ತು. ಉದ್ದೇಶಿತ ತಿದ್ದುಪಡಿಯನ್ನು ಪುನರ್ ಪರಿಶೀಲಿಸುವಂತೆ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಇಲಾಖೆ ಅಭಿಪ್ರಾಯಿಸಿದೆ. ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಇಲಾಖೆ ಸೂಚಿಸಿರುವ ಪ್ರಕಾರ ಉದ್ದೇಶಿತ ತಿದ್ದುಪಡಿಯನ್ನು ಪುನರ್ ಪರಿಶೀಲಿಸಲು ಶೀಘ್ರ ಕ್ರಮ ಕೈಗೊಳ್ಳಲಾಗುತ್ತಿದೆ.

ನಗರಸಭೆ ಮತ್ತು ನಗರಾಭಿವೃದ್ಧಿ ಪ್ರಾಧಿಕಾರ ಅಭಿವೃದ್ಧಿ ಶುಲ್ಕ ತೆಗೆದುಕೊಳ್ಳದೇ ಇರುವುದು.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 89(193)

ಸದಸ್ಯರ ಹೆಸರು: ಶ್ರೀ ಎಂ.ಎಸ್.ಆತ್ಮಾನಂದ(ಮಂಡ್ಯ)

ಉತ್ತರಿಸುವ ಸಚಿವರು: ಶ್ರೀ ಬಿ.ಬಿ.ಚಿಮ್ಮನಕಟ್ಟಿ(ನಗರಾಭಿವೃದ್ಧಿ ಸಚಿವರು)